ಕರ್ನಾಟಕ ಸರ್ಕಾರ

ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ.

**HASSAN INSTITUTE OF MEDICAL SCIENCES, HASSAN**

**(An Autonomous Medical Institution, Government of Karnataka )**

**SRI CHAMARAJENDRA HOSPITAL CAMPUS, HASSAN-573201**

**Website: www.hims-hassan.org, Phone/Fax No.08172-231699/ 231599 , Email: directorhims@yahoo.com**

# 24ನೇ ಆಡಳಿತ ಮಂಡಳಿ ಸಭೆಯ ಸಭಾ ನಡವಳಿಗಳು

**ದಿನಾಂಕ: 11-09-2015ನೇ ಶುಕ್ರವಾರ,**

**ಮಧ್ಯಾಹ್ನ : 3.00 ಗಂಟೆಗೆ**

**:ಸ್ಥಳ:**

**ಕೊಠಡಿ ಸಂಖ್ಯೆ: 301, 3ನೇ ಮಹಡಿ,**

**ವಿಧಾನ ಸೌಧ, ಬೆಂಗಳೂರು.**

**ಊಊಊ**

ಕರ್ನಾಟಕ ಸರ್ಕಾರ
ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ
HASSAN INSTITUTE OF MEDICAL SCIENCES, HASSAN
(An Autonomous Institute under the Dept of Medical Education, Government of Karnataka)
SRI CHAMARAJENDRA HOSPITAL CAMPUS, HASSAN-573201
Website: www.hims-hassan.org Phone/Fax No.08172-231699 Email:directorhims@yahoo.com

# 24ನೇ ಆಡಳಿತ ಮಂಡಳಿ ಸಭೆಯ ಸಭಾ ನಡವಳಿಗಳು

ದಿನಾಂಕ:11-09-2015 ಶುಕ್ರವಾರ, ಮಧ್ಯಾಹ್ನ:3.00ಗಂಟೆಗೆ ಕೊಠಡಿ ಸಂಖ್ಯೆ:301, 3ನೇ ಮಹಡಿ, ವಿಧಾನ ಸೌಧ, ಬೆಂಗಳೂರು ಇಲ್ಲಿ ಸನ್ಮಾನ್ಯ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು, ಕರ್ನಾಟಕ ಸರ್ಕಾರ ಹಾಗೂ ಅಧ್ಯಕ್ಷರು, ಆಡಳಿತ ಮಂಡಳಿ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ ಇವರ ಘನ ಅಧ್ಯಕ್ಷತೆಯಲ್ಲಿ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ 24ನೇ ಆಡಳಿತ ಮಂಡಳಿ ಸಭೆ ಸೇರಿ ನಡೆಸಿದ ಸಭಾ ನಡವಳಿಗಳು.

**ಒಟ್ಟು ಸದಸ್ಯರ ಸಂಖ್ಯೆ:09** — **ಹಾಜರಿದ್ದ ಸದಸ್ಯರ ಸಂಖ್ಯೆ:05**

| | | | |
|---|---|---|---|
| 01 | ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು, ಕರ್ನಾಟಕ ಸರ್ಕಾರ ಹಾಗೂ ಅಧ್ಯಕ್ಷರು, ಆಡಳಿತ ಮಂಡಳಿ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ | ಅಧ್ಯಕ್ಷರು | ಹಾಜರಿರುತ್ತಾರೆ |
| 02 | ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ವೈದ್ಯಕೀಯ ಶಿಕ್ಷಣ), ಕರ್ನಾಟಕ ಸರ್ಕಾರ, ವಿಕಾಸ ಸೌಧ, ಬೆಂಗಳೂರು. | ಉಪಾಧ್ಯಕ್ಷರು | ಹಾಜರಿರುತ್ತಾರೆ |
| 03 | ಮಾನ್ಯ ಕುಲಪತಿಗಳು, ರಾಜೀವ್ ಗಾಂಧಿ, ಆರೋಗ್ಯ ವಿಜ್ಞಾನಗಳ ವಿಶ್ವ ವಿದ್ಯಾಲಯ, ಕರ್ನಾಟಕ, ಬೆಂಗಳೂರು. | ಸದಸ್ಯರು | -- |
| 04 | ಮಾನ್ಯ ಪ್ರಧಾನಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು. | ಸದಸ್ಯರು | ಹಾಜರಿರುತ್ತಾರೆ |
| 05 | ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ವಿಕಾಸ ಸೌಧ, ಬೆಂಗಳೂರು. | ಸದಸ್ಯರು | -- |
| 06 | ಮಾನ್ಯ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, ಆನಂದರಾವ್ ವೃತ್ತ, ಬೆಂಗಳೂರು. | ಸದಸ್ಯರು | ಹಾಜರಿರುತ್ತಾರೆ |

| | | | |
|---|---|---|---|
| 07 | ಮಾನ್ಯ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ. | ಸದಸ್ಯರು | -- |
| 08 | ಮಾನ್ಯ ನಿರ್ದೇಶಕರು, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ. | ಸದಸ್ಯ ಕಾರ್ಯದರ್ಶಿ | -- |
| 09 | ಕಾರ್ಯಪಾಲಕ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ , ಕರ್ನಾಟಕ ಸರ್ಕಾರ, ಬೆಂಗಳೂರು | ವಿಶೇಷ ಆಹ್ವಾನಿತರು | ಹಾಜರಿರುತ್ತಾರೆ |

| ಅಜೆಂಡಾ ಕ್ರ.ಸಂ. | ವಿಷಯ | ತೀರ್ಮಾನ |
|---|---|---|
| 1 | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಖಾಲಿ ಇದ್ದ ನಿರ್ದೇಶಕರಹುದ್ದೆಯ ನೇಮಕಾತಿ ಸಂಬಂಧದಿನಾಂಕ:02-09-2015 ರಂದು ನಡೆದ ಸಂಸ್ಥೆಯ ನಿರ್ದೇಶಕರ ನೇರ ನೇಮಕಾತಿ ಸಂದರ್ಶನದಲ್ಲಿ ಸಮಿತಿಯು ಹಿಮ್ಸ್ ಸಂಸ್ಥೆಗೆ ನಿರ್ದೇಶಕರನ್ನಾಗಿ ಆಯ್ಕೆಮಾಡುವ ಬಗ್ಗೆ ಶಿಫಾರಸ್ಸು ಮಾಡಿರುವ ನಡವಳಿಯನ್ನು ಪರಿಶೀಲಿಸುವ ಹಾಗೂ ಅನುಮೋದಿಸುವ ಬಗ್ಗೆ. | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಖಾಲಿ ಇದ್ದ ನಿರ್ದೇಶಕರ ಹುದ್ದೆಯ ನೇಮಕಾತಿ ಸಂಬಂಧ ದಿನಾಂಕ:11-09-2015ರಂದು 24ನೇ ಆಡಳಿತ ಮಂಡಳಿಯ ಸಭೆಯನ್ನು ನಿಗದಿ ಪಡಿಸಲಾಗಿದ್ದು, ಅಂದಿನ ಸಭೆಯಲ್ಲಿ ಸಂಸ್ಥೆಯ ನಿರ್ದೇಶಕರ ನೇಮಕಾತಿಯ ವಿಷಯ ಒಂದೇ ಇದ್ದು, ಈ ವಿಷಯವು ಆಡಳಿತ ಮಂಡಳಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಸಂಸ್ಥೆಯ ಪ್ರಭಾರಿ ನಿರ್ದೇಶಕರು, ನಿರ್ದೇಶಕರ ಆಯ್ಕೆಯಲ್ಲಿ ಒಬ್ಬ ಅಭ್ಯರ್ಥಿಯಾಗಿದ್ದರಿಂದ ಆಡಳಿತ ಮಂಡಳಿ, ಹಿಮ್ಸ್, ಹಾಸನ ಇದರ ಅಧ್ಯಕ್ಷರು ಹಾಗೂ ಕರ್ನಾಟಕ ವೈದ್ಯಕೀಯ ಶಿಕ್ಷಣ ಸಚಿವರ ಅನುಮತಿ ಪಡೆದು ಸಭೆಗೆ ಗೈರು ಹಾಜರಾಗಿದ್ದರಿಂದ, ಅಧ್ಯಕ್ಷರು ಈ ಹಿಂದೆಯೇ ಸೂಚನೆ ನೀಡಿದಂತೆ ನೇಮಕಾತಿ ಸಭೆಯ ನಡವಳಿ ಹಾಗೂ ಅಂಕ ಪಟ್ಟಿಗಳನ್ನು ಒಂದು ಲಕೋಟೆಯಲ್ಲಿಟ್ಟು ಮೊಹರು ಮಾಡಿ ಸುರಕ್ಷಿತವಾಗಿಟ್ಟುಕೊಂಡಿದ್ದ ಲಕೋಟೆಯನ್ನು ಸಭೆಯ ಮುಂದೆ ಮಂಡಿಸಲು ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿಗಳೀಗೆ ನೀಡಿದ ನಿರ್ದೇಶನದಂತೆ, ಮೊಹರು ಮಾಡಿದ ಲಕೋಟೆಯನ್ನು ಮಾನ್ಯ ಉಪಾಧ್ಯಕ್ಷರು, ಆಡಳಿತ ಮಂಡಳಿ, ಹಿಮ್ಸ್, ಹಾಸನ ಹಾಗೂ ಸರ್ಕಾರದ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿಗಳು ನೀಡಿದ್ದು, ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಲಕೋಟೆಯನ್ನು ತೆರೆದು ಅದರಲ್ಲಿದ್ದ ದಿನಾಂಕ: 02.09.2015ರ ನೇಮಕಾತಿ ಸಮಿತಿಯ ಸಭ ನಡವಳಿ ಹಾಗೂ ಅಂಕಪಟ್ಟಿಗಳಲ್ಲಿರುವ ಎಲ್ಲಾ ವಿವರಗಳನ್ನು ಮಾನ್ಯ ಅಧ್ಯಕ್ಷರು ಹಾಗೂ ಇತರ ಸದಸ್ಯರುಗಳಿಗೆ ಸವಿವರವಾಗಿ ತಿಳಿಸಿದರು.<br>ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಆಕುಕ, (ವೈದ್ಯಕೀಯ ಶಿಕ್ಷಣ), ಕರ್ನಾಟಕ ಸರ್ಕಾರರವರು ನೀಡಿದ ಎಲ್ಲಾ ವಿವರಗಳನ್ನು ಸಭೆಯಲ್ಲಿ ಚರ್ಚಿಸಿ ದಿನಾಂಕ: 02-09-2015ರಂದು ಸಂಸ್ಥೆಯ ನಿರ್ದೇಶಕರ ನೇಮಕಾತಿ ಸಮಿತಿಯು, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರ ಹುದ್ದೆಗೆ ನೇಮಕ ಮಾಡಲು ಶಿಫಾರಸ್ಸು ಮಾಡಿರುವ ಡಾ.ಬಿ.ಸಿ.ರವಿಕುಮಾರ್, ಪ್ರಾಂಶುಪಾಲರು, |

| ಅಜೆಂಡಾ ಕ್ರ.ಸಂ. | ವಿಷಯ | ತೀರ್ಮಾನ |
|---|---|---|
| | | ಹಿಮ್ಸ್, ಹಾಸನ ಹಾಗೂ ಪ್ರಾಧ್ಯಾಪಕರು ಮತ್ತು ವಿಭಾಗದ ಮುಖ್ಯಸ್ಥರು, ಡರ್ಮಟಾಲಜಿ ವಿಭಾಗ, ಹಿಮ್ಸ್, ಹಾಸನರವರನ್ನು ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಸನದ ನಿರ್ದೇಶಕರ ಹುದ್ದೆಗೆ ನೇಮಕ ಮಾಡಲು ಹಿಮ್ಸ್, ಆಡಳಿತ ಮಂಡಳಿ ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿ ಅಂಗೀಕರಿಸಲಾಯಿತು.<br>" ವಂದನೆಗಳೊಂದಿಗೆ ಸಭೆ ಮುಕ್ತಾಯವಾಯಿತು" |

(ಡಾ. ಹರಸೂರು ಸಿದ್ದರಾಮೇಶ್ವರ )
ನಿರ್ದೇಶಕರು,
ವೈದ್ಯಕೀ ಶಿಕ್ಷಣ ನಿರ್ದೇಶನಾಲಯ,
ಕರ್ನಾಟಕ ಸರ್ಕಾರ, ಆನಂದರಾವ್ ವೃತ್ತ,
ಬೆಂಗಳೂರು.

Personal Assistant to
Director of Medical Education

Director of Medical Education
Ananda Rao Circle, Bangalore

(ಎಮ್. ಲಕ್ಷ್ಮೀ ನಾರಾಯಣ) ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ, ಕರ್ನಾಟಕ ಸರ್ಕಾರ ಹಾಗೂ ಉಪಾಧ್ಯಕ್ಷರು,
ಆಡಳಿತ ಮಂಡಳಿ, ಹಿಮ್ಸ್, ಹಾಸನ.

M. LAKSHMINARAYANA. IAS
Principal Secretary to Government
Health and Family Welfare Department
(Medical Education)

(ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್)
ವೈದ್ಯಕೀಯ ಶಿಕ್ಷಣ ಸಚಿವರು,
ಕರ್ನಾಟಕ ಸರ್ಕಾರ ಹಾಗೂ
ಅಧ್ಯಕ್ಷರು, ಆಡಳಿತ ಮಂಡಳಿ,
ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ